156ನಿಬ = (131)
LRR
010126

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಬಲ್ಕೀಸ್ ಬಾನು ರವರು ನಿಯಮ-72 ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ಕರ್ನಾಟಕ ರಾಜ್ಯದ 5000 ಗ್ರಾಮ ಪಂಚಾಯತ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್, ಇತರೆ ಸಿಬ್ಬಂದಿಗಳಿಗೆ ಸೇವಾ ಹಿರಿತನ ವೇತನ ಮಂಜೂರು ಮಾಡುವುದು ಹಾಗೂ ಈ ಹುದ್ದೆಗಳನ್ನೇ ಕಾರ್ಮಿಕ ಇಲಾಖೆಯಲ್ಲಿ ಅತಿಕುಶಲ ಕಾರ್ಮಿಕ (High Skilled Workers) ವಲಯದಡಿಯಲ್ಲಿ ಸೇರ್ಪಡೆ ಮಾಡಿ ವೇತನ ಹೆಚ್ಚಳ ಸೇರಿದಂತೆ ಪ್ರತಿಯೊಂದು ಗ್ರಾಮ ಪಂಚಾಯಿತಿಗೆ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳನ್ನು ಮಂಜೂರು ಮಾಡುವ ಕುರಿತು.

***

**ಉತ್ತರ:** ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29-09-2020 ರಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ಅನ್ನು ರೂಪಿಸಲಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ಮತ್ತು 113 ರಂತೆ ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ವರ್ಗದ ಸ್ವರೂಪ, ನೇಮಕಾತಿ ವಿಧಾನ, ರಜೆ ಸೌಲಭ್ಯ, ಅನುಕಂಪದ ಆಧಾರಿತ ನೇಮಕಾತಿ, ಶಿಸ್ತು ಪ್ರಾಧಿಕಾರ, ಮರಣ ಮತ್ತು ನಿವೃತ್ತಿ ಉಪದಾನ ಮತ್ತು ಇತರೆ ಸೇವಾ ಷರತ್ತುಗಳನ್ನು ನಿರ್ದಿಷ್ಟಪಡಿಸಲಾಗಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 113 ರಲ್ಲಿ ಗ್ರಾಮ ಪಂಚಾಯಿತಿಯು ನೌಕರರನ್ನು ನೇಮಕ ಮಾಡಿಕೊಂಡು ತಮ್ಮ ಸ್ವಂತ ಸಂಪನ್ಮೂಲದಿಂದ ವೇತನವನ್ನು ಪಾವತಿಸಬೇಕಾಗಿರುತ್ತದೆ. ಗ್ರಾಮ ಪಂಚಾಯಿತಿಗಳು ಸರ್ಕಾರದ ಮಾರ್ಗಸೂಚಿ ಅನುಸರಿಸದೆ ಹೆಚ್ಚಿನ ಸಿಬ್ಬಂದಿಗಳನ್ನು ನೇಮಿಸಿಕೊಂಡಿದ್ದರಿಂದ ಅವರಿಗೆ ಸಮರ್ಪಕವಾಗಿ ಕನಿಷ್ಠ ವೇತನ ಪಾವತಿಸುತ್ತಿರಲಿಲ್ಲ. ಗ್ರಾಮ ಪಂಚಾಯತ್ ಸಿಬ್ಬಂದಿಗಳು ತಮಗೆ ಸಮರ್ಪಕವಾಗಿ ಕನಿಷ್ಠ ವೇತನ ಪಾವತಿಯಾಗದಿರುವ ಬಗ್ಗೆ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದನ್ನು ಪರಿಗಣಿಸಿ ಮಾರ್ಚ್ 2018 ರಿಂದ ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ಸರ್ಕಾರದ ವತಿಯಿಂದ ವೇತನಕ್ಕಾಗಿ ಭಾಗಶಃ ಅನುದಾನ ಬಿಡುಗಡೆ ಮಾಡಲಾಗುತ್ತಿದ್ದು, ಗ್ರಾಮ ಪಂಚಾಯತಿಗಳು ಕನಿಷ್ಠ ವೇತನ ಪಾವತಿಸುತ್ತಿವೆ. ಕಾರ್ಮಿಕ ಇಲಾಖೆಯು ಗ್ರಾಮ ಪಂಚಾಯಿತಿ ನೌಕರರಿಗೆ ಕಾಲಕಾಲಕ್ಕೆ ನಿಗದಿಪಡಿಸುವ ಕನಿಷ್ಠ ವೇತನವನ್ನು ನೀಡಲಾಗುತ್ತದೆ.

ಪ್ರಸ್ತುತ 2025-26 ನೇ ಸಾಲಿಗೆ ನಿಗದಿಪಡಿಸಿರುವ ಕನಿಷ್ಠ ವೇತನ ಮತ್ತು ವ್ಯತ್ಯಾಸವಾಗುವ ತುಟ್ಟಿಭತ್ಯೆ ಈ ಕೆಳಕಂಡಂತಿದೆ.

| ಕ್ರ. ಸಂ | ಪದನಾಮ | ಕನಿಷ್ಠ ವೇತನ ನೀಡುತ್ತಿರುವ ವಿವರ (ರೂ.ಗಳಲ್ಲಿ) | ವ್ಯತ್ಯಾಸವಾಗುವ ತುಟ್ಟಿಭತ್ಯೆ (ರೂ.ಗಳಲ್ಲಿ) | ಒಟ್ಟು (ರೂ.ಗಳಲ್ಲಿ) |
|---|---|---|---|---|
| 1 | ಬಿಲ್ ಕಲೆಕ್ಟರ್ | 15,196.72 | 2818.80 | 18,015.52 |
| 2 | ಕ್ಲರ್ಕ ಕಂ ಡಾಟಾ | 15,196.72 | 2818.80 | 18,015.52 |

| | | | | |
|---|---|---|---|---|
| | ಎಂಟ್ರಿ ಆಪರೇಟರ್ | | | |
| 3 | ವಾಟರ್ ಆಪರೇಟರ್ | 13,509.32 | 2818.80 | 16,328.12 |
| 4 | ಅಟೆಂಡಂಟ್ | 12,873.52 | 2818.80 | 15,692.32 |
| 5 | ಕ್ಲೀನರ್ಸ್ | 16,019.52 | 2818.80 | 18838.32 |

ಕನಿಷ್ಠ ವೇತನವನ್ನು ಕಾರ್ಮಿಕ ಇಲಾಖೆಯಿಂದ ನಿಗಧಿಪಡಿಸಲಾಗುತ್ತಿರುವುದರಿಂದ ಕಾರ್ಮಿಕ ಇಲಾಖೆಯಿಂದಲೇ ಉದ್ಯೋಗಿಗಳನ್ನು ಪ್ರವರ್ಗಗಳನ್ನಾಗಿ ವಿಂಗಡಿಸಿ ವಲಯವಾರು ಅಧಿಸೂಚನೆ ಹೊರಡಿಸಿದ ಆಧಾರದ ಮೇಲೆ ವೇತನ ಪಾವತಿಸಲಾಗುತ್ತದೆ.

ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಒಳಗೊಂಡಂತೆ ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಪಂಚಾಯಿತಿ ಸಿಬ್ಬಂದಿಗಳಿಗೆ ಸೇವಾ ಹಿರಿತನದ ಆಧಾರದ ಮೇಲೆ ವೇತನ ನೀಡುವ ಕುರಿತು ಸರ್ಕಾರದಲ್ಲಿ ಪರಿಶೀಲನೆಯಲ್ಲಿ ಇರುತ್ತದೆ.

ಹಾಲಿ ಇರುವ ಎಲ್ಲಾ ಗ್ರಾಮ ಪಂಚಾಯತಿಗಳಿಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆ ಸೃಜನೆ ಮಾಡುವುದು ಮತ್ತು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ದ್ವಿತೀಯ ದರ್ಜೆ ಲೆಕ್ಕ ಸಹಾಯಕರನ್ನು ಪ್ರಥಮ ದರ್ಜೆ ಲೆಕ್ಕ ಸಹಾಯಕರಾಗಿ ಗ್ರೇಡ್ 1 ಗ್ರಾಮ ಪಂಚಾಯಿತಿಗಳಲ್ಲಿಯೇ ಮುಂಬಡ್ತಿ ನೀಡಬೇಕೆಂದು ವೃಂದ ಸಂಘಗಳ ಬೇಡಿಕೆಯಿದ್ದು, ಈ ಬೇಡಿಕೆಯ ಸಾಧಕ ಬಾಧಕಗಳ ಕುರಿತು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ ರವರು ಅಧ್ಯಯನ ನಡೆಸಿ ವರದಿಯನ್ನು ಸಲ್ಲಿಸಿರುತ್ತಾರೆ. ಈ ಅಧ್ಯಯನ ವರದಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ವೃಂದ ಸಂಘಗಳ ಬೇಡಿಕೆಗಳ ಕುರಿತು ಪರಿಶೀಲಿಸುವ ಸಲುವಾಗಿ ಪಂಚಾಯತ್ ರಾಜ್ ಆಯುಕ್ತರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಸಮಿತಿಯಲ್ಲಿಯೂ ಪರಿಶೀಲಿಸಲಾಗಿರುತ್ತದೆ. ಈ ಸಮಿತಿಯು ತನ್ನ ಶಿಫಾರಸ್ಸುಗಳೊಂದಿಗೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ್ದು, ಈ ವರದಿಯು ಸರ್ಕಾರದಲ್ಲಿ ಪರಿಶೀಲನೆಯಲ್ಲಿರುತ್ತದೆ.

**ಸಂಖ್ಯೆ: ಗ್ರಾಅಪ 697 ಗ್ರಾಪಂಅ 2025**

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.